ಪ್ರಗತಿಯಲ್ಲಿರುವ ಮುಜರಾಯಿ ಇಲಾಖೆಯ ಯೋಜನೆಗಳು.

169 (468); ಶ್ರೀ ಐಹೊಳೆ ಡಿ. ಮಹಾಲಿಂಗಪ್ಪ (ರಾಯಬಾಗ)

ಅ) ಬೆಳಗಾವಿ ಜಿಲ್ಲೆಯಲ್ಲಿ ಮುಜರಾಯಿ ಇಲಾಖೆಯ ವತಿಯಿಂದ ಪ್ರಗತಿಯಲ್ಲಿರುವ ಯೋಜನೆಗಳಾವುವು; ಅವುಗಳಿಗೆ ಮೀಸಲಿಟ್ಟ ಹಣವೆಷ್ಟು; (ತಾಲ್ಲೂಕುವಾರು ಯೋಜನೆಗಳವಾರು ವಿವರ ಒದಗಿಸುವುದು)

ಆ) ಜಿಲ್ಲೆಯಲ್ಲಿ ಇಲಾಖೆಯ ವತಿಯಿಂದ ಹಮ್ಮಿಕೊಳ್ಳಲು ಉದ್ದೇಶಿಸಿರುವ ಯೋಜನೆಗಳಾವುವು; ಅವುಗಳ ರೂಪರೇಷಗಳೇನು? (ತಾಲ್ಲೂಕು ವಾರು ಯೋಜನೆಗಳವಾರು ವಿವರ ಒದಗಿಸುವುದು)

ಇ) ಜಿಲ್ಲೆಯಲ್ಲಿ ಇಲಾಖೆಗೆ ಹೊಸ ಪ್ರಸ್ತಾವನೆಗಳೇನಾದರೂ ಬಂದಿವೆಯೇ? ಹಾಗಿದ್ದಲ್ಲಿ ಈ ಬಗ್ಗೆ ಕೈಗೊಂಡಿರುವ ಕ್ರಮಗಳೇನು (ವಿವರ ಒದಗಿಸುವುದು)

ಶ್ರೀ ಪ್ರಕಾಶ್ ಬಾಬಣ್ಣ ಹುಕ್ಕೇರಿ (ಸಣ್ಣ ಕೈಗಾರಿಕೆ, ಸಕ್ಕರೆ ಮತ್ತು ಮುಜರಾಯಿ ಸಚಿವರು)

ಅ) ಧಾರ್ಮಿಕ ದತ್ತಿ ಇಲಾಖೆಯ ವತಿಯಿಂದ ಈ ಕೆಳಕಂಡ ಯೋಜನೆಗಳನ್ನು ಅನುಷ್ಠಾನಗೊಳಿಸಲಾಗುತ್ತಿದೆ. ಆದರೆ ಜಿಲ್ಲಾವಾರು/ ತಾಲ್ಲೂಕುವಾರು ಯೋಜನೆಗಳೆಂದು ನಿರ್ದಿಷ್ಟ ಪಡಿಸಿರುವುದಿಲ್ಲ.

2013–2014 ನೇ ಸಾಲಿನಲ್ಲಿ ಈ ಯೋಜನೆಯಡಿ ಒದಗಿಸಿರುವ ಹಾಗೂ ಬೆಳಗಾವಿ ಜಿಲ್ಲೆಗೆ ಬಿಡುಗಡೆ ಮಾಡಿರುವ ಅನುದಾನ ಈ ಕೆಳಗಿನಂತಿದೆ;

ಕ್ರ.ಸಂ	ಯೋಜನೆ	ಮಂಜೂರು ಮಾಡಿರುವ ಮೊತ್ತ (ರೂ.ಲಕ್ಷಗಳಲ್ಲಿ)
1.	ಧಾರ್ಮಿಕ ಸಂಸ್ಥೆಗಳಿಗಳಿಗೆ ಸಹಾಯಾನುದಾನ	801.00
2.	ಆರಾಧನಾ/ವಿಶೇಷ ಘಟಕ/ ಗಿರಿಜನ ಉಪಯೋಜನೆ	270.00
3.	ಹಿಂದೂ ರುದ್ರಭೂಮಿಗಳ ಅಭಿವೃದ್ಧಿ ಯೋಜನೆ	135.62
	ಒಟ್ಟು	**1206.62**

ಆ) ಈ ಜಿಲ್ಲೆಗೆ ಸಂಬಂಧಿಸಿದಂತೆ ಪ್ರತ್ಯೇಕವಾಗಿ ಯಾವುದೇ ಯೋಜನೆಗಳನ್ನು ಹಮ್ಮಿಕೊಂಡಿರುವುದಿಲ್ಲ.

ಇ) ಈ ಜಿಲ್ಲೆಗೆ ಸಂಬಂಧಿಸಿದಂತೆ ಪ್ರತ್ಯೇಕವಾಗಿ ಯಾವುದೇ ಹೊಸ ಯೋಜನೆಗಳನ್ನು ಹಮ್ಮಿಕೊಂಡಿಲ್ಲವಾದ್ದರಿಂದ, ಹೊಸ ಪ್ರಸ್ತಾವಗಳ ಬಗ್ಗೆ ಕ್ರಮ ಕೈಗೊಳ್ಳುವ ಪ್ರಶ್ನೆ ಉದ್ಭವಿಸುವುದಿಲ್ಲ.

ಪ್ರಗತಿಯಲ್ಲಿರುವ ಕಾರ್ಮಿಕ ಇಲಾಖೆಯ ಯೋಜನೆಗಳು

170(469); ಶ್ರೀ ಐಹೊಳೆ ಡಿ. ಮಹಾಲಿಂಗಪ್ಪ(ರಾಯಬಾಗ)

ಅ) ಕಾರ್ಮಿಕ ಇಲಾಖೆಯ ವತಿಯಿಂದ ಪ್ರಗತಿಯಲ್ಲಿರುವ ಯೋಜನೆ ಗಳಾವುವು; ಅವುಗಳಿಗೆ ಮೀಸಲಿಟ್ಟ ಹಣವೆಷ್ಟು (ತಾಲ್ಲೂಕುವಾರು, ಯೋಜನೆವಾರು ವಿವರ ಒದಗಿಸುವುದು)

ಆ) ಜಿಲ್ಲೆಯಲ್ಲಿ ಇಲಾಖೆಯ ವತಿಯಿಂದ ಹಮ್ಮಿಕೊಳ್ಳಲು ಉದ್ದೇಶಿಸಿರುವ ಯೋಜನೆಗಳಾವುವು; ಅವುಗಳ ರೂಪುರೇಖೆಗಳೇನು? (ಯೋಜನೆ ವಾರು ವಿವರ ಒದಗಿಸುವುದು)